**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.**

ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಜೂನ್-23/03/2023-24

ದಿನಾಂಕ:15.05.2023

**:: ಸುತ್ತೋಲೆ ::**

ವಿಷಯ:- ಜೂನ್-2023ರ ಮಾಹೆಯಲ್ಲಿ ನಡೆಯಲಿರುವ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಅರ್ಹ ವಿದ್ಯಾರ್ಥಿಗಳನ್ನು ನೋಂದಾಯಿಸಲು ಹಾಗೂ ಮಾರ್ಚ್-2023ರ ಮುಖ್ಯ ಪರೀಕ್ಷೆಯಲ್ಲಿ ಹಾಜರಾದ ವಿದ್ಯಾರ್ಥಿಗಳ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಸ್ಕ್ಯಾನ್ ಪ್ರತಿ ಪಡೆಯಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:-
1. ಮಂಡಳಿ ಅಧಿಸೂಚನೆ ಸಂಖ್ಯೆ: ಎ8/ಎಸ್ಎಸ್ಎಲ್‌ಸಿ/ಜೂನ್-23/03/2023-24 ದಿನಾಂಕ: 07.05.2023.
2. ಈ ಕಛೇರಿ ಸುತ್ತೋಲೆ ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಮು.ಪ.ಫ/02/2023-24 ದಿನಾಂಕ:07.05.2023

* * * * *

2023ನೇ ಜೂನ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ರಾಜ್ಯದ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲೆಗಳಿಂದ ಹಾಜರಾಗುವ ಅರ್ಹ ಶಾಲಾ ವಿದ್ಯಾರ್ಥಿಗಳು, ಖಾಸಗಿ ಅಭ್ಯರ್ಥಿಗಳು ಮತ್ತು ಪುನರಾವರ್ತಿತ ಅಭ್ಯರ್ಥಿಗಳ ಮಾಹಿತಿಯನ್ನು ಆನ್‌ಲೈನ್ ಮುಖಾಂತರ ನೋಂದಾಯಿಸಲು ಅವದಿಯನ್ನು ದಿನಾಂಕ:15.05.2023ರವರೆಗೆ ನಿಗದಿಗೊಳಿಸಿ ಅಧಿಸೂಚನೆಯನ್ನು ಹೊರಡಿಸಲಾಗಿತ್ತು ಹಾಗೂ ಮಾರ್ಚ್-2023ರ ಮುಖ್ಯ ಪರೀಕ್ಷೆಯಲ್ಲಿ ಹಾಜರಾದ ವಿದ್ಯಾರ್ಥಿಗಳ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಸ್ಕ್ಯಾನ್ ಪ್ರತಿ ಪಡೆಯಲು ದಿನಾಂಕ:14.05.2023ರವರೆಗೆ ನಿಗದಿಗೊಳಿಸಿ ಸುತ್ತೋಲೆಯನ್ನು ಹೊರಡಿಸಲಾಗಿತ್ತು

ಆದರೆ, ರಾಜ್ಯದ ಕೆಲವು ಶಾಲೆಗಳಿಂದ ಹಾಗೂ ಪೋಷಕರಿಂದ ಮಂಡಳಿಗೆ ದೂರವಾಣಿಯ ಮುಖಾಂತರ ದಿನಾಂಕವನ್ನು ವಿಸ್ತರಿಸಲು ಕೋರಿಕೆಗಳು ಬಂದ ಹಿನ್ನೆಲೆಯಲ್ಲಿ, ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

**ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿಯನ್ನು ನೋಂದಾಯಿಸಲು ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿದ ದಿನಾಂಕ**

| ಕ್ರ ಸಂ | ವಿವರ | **ಈಗಾಗಲೇ ನಿಗದಿಪಡಿಸಿದ್ದ ದಿನಾಂಕ** | **ವಿಸ್ತರಣೆ ಮಾಡಿದ ಕೊನೆಯ ದಿನಾಂಕ** |
|---|---|---|---|
| 1 | ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ **ಅಂತಿಮ** ದಿನಾಂಕ: | 15.05.2023 | 18.05.2023 |
| 2 | ಮಂಡಳಿ ಜಾಲತಾಣದ ಶಾಲಾ ಲಾಗಿನ್ ಮೂಲಕ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಳ್ಳಲು ನಿಗದಿಪಡಿಸಿದ ದಿನಾಂಕ: | 17.05.2023 | 19.05.2023 |
| 3 | ಕ್ರಮ ಸಂಖ್ಯೆ-2ರಂತೆ ಚಲನ್ ಮುದ್ರಿಸಿಕೊಂಡು ಬ್ಯಾಂಕ್‌ಗೆ ಜಮೆ ಮಾಡಲು ನಿಗದಿಪಡಿಸಿದ ದಿನಾಂಕ | 18.05.2023 | 20.05.2023 |
| 4 | 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಪರೀಕ್ಷಾ ಶುಲ್ಕವನ್ನು ಹಳೆಯ ಪದ್ಧತಿಯಂತೆ ಮಂಡಳಿಯ ನೆಫ್ಟ್ ಚಲನ್ ಮೂಲಕ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಪಾವತಿಸಲು ನಿಗದಿಪಡಿಸಿದ **ಅಂತಿಮ** ದಿನಾಂಕ | 18.05.2023 | 20.05.2023 |
| 5 | ಅಧಿಸೂಚನೆಯಲ್ಲಿ ಸೂಚಿಸಿರುವಂತೆ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ನಿಗದಿಪಡಿಸಿದ **ಅಂತಿಮ** ದಿನಾಂಕ | 25.05.2023 | 25.05.2023 |

**ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ನಿಗದಿಪಡಿಸಿದ ದಿನಾಂಕ**

| ವಿವರ | ಈಗಾಗಲೇ ನಿಗದಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|
| ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು **ಅಂತಿಮ** ದಿನಾಂಕ | 14.05.2023 | 18.05.2023 |
| ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಿದ ನಂತರ Offline ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬಿ1/ಕೆ1/ಗ್ರಾಮ1 /ಬ್ಯಾಂಕಿಗೆ ಪಾವತಿಸಲು **ಅಂತಿಮ** ದಿನಾಂಕ: | 15.05.2023 | 19.05.2023 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕದ ಕುರಿತು ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲಾ ಮುಖ್ಯೋಪಾಧ್ಯಾಯರ ಮುಖಾಂತರ ವಿದ್ಯಾರ್ಥಿಗಳ/ಪೋಷಕರ ಗಮನಕ್ಕೆ ತಂದು ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

(ಮಾನ್ಯ ಅಧ್ಯಕ್ಷರ ಆದೇಶಾನುಸಾರ)

15/5/2023.

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

ಗೆ

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಸಾ ಶಿ ಇ ರವರು ಕೂಡಲೇ ಕ್ರಮವಹಿಸಲು ತಿಳಿಸಿದೆ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಗಣಕಶಾಖೆರವರು ಸದರಿ ಸುತ್ತೋಲೆಯನ್ನು ಮಂಡಳಿ ಜಾಲಾತಾಣ ಮತ್ತು ಶಾಲಾ ಲಾಗಿನ್ ನಲ್ಲಿ ಪ್ರಕಟಿಸುವುದು.

**ಪ್ರತಿಯನ್ನು:**

1. ಮಾನ್ಯ ಅಧ್ಯಕ್ಷರ ಆಪ್ತ ಶಾಖೆಗೆ ಮಾಹಿತಿಗಾಗಿ
2. ಕಛೇರಿ ಪ್ರತಿ.